# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 472 |
| 2. | ಸದಸ್ಯರ ಹೆಸರು | : | ಶ್ರೀಮತಿ ಎಸ್. ವೀಣಾ ಅಚ್ಚಯ್ಯ |
| 3. | ಉತ್ತರಿಸಬೇಕಾದ ದಿನಾಂಕ | : | 10-12-2020 |
| 4. | ಉತ್ತರಿಸುವ ಸಚಿವರು | : | ಮಾನ್ಯ ಜಲಸಂಪನ್ಮೂಲ ಸಚಿವರು |

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಕೊಡಗು ಜಿಲ್ಲೆಯ ಹಲವಾರು ನದಿಗಳಲ್ಲಿ ಸಾಕಷ್ಟು ಹೂಳು ತುಂಬಿದ್ದು, ಅದನ್ನು ತೆಗೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ; | ಹೌದು. |
| ಆ | ಕ್ರಮ ಕೈಗೊಂಡಿದ್ದಲ್ಲಿ, ಸದರಿ ಕಾಮಗಾರಿಗೆ ಈಗಾಗಲೇ ಎಷ್ಟು ಅನುದಾನ ಒದಗಿಸಲಾಗಿದೆ; | 1. ಹಾರಂಗಿ ಜಲಾನಯನ ಪ್ರದೇಶ ಮತ್ತು ನದಿ ಪಾತ್ರದ ಪುನಶ್ಚೇತನ ಹಾಗೂ ರಕ್ಷಣಾ ಕಾಮಗಾರಿಯ ರೂ.130.00 ಕೋಟಿ ಮೊತ್ತದ ಅಂದಾಜಿಗೆ ದಿನಾಂಕ:19-11-2020 ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಮುಂದಿನ ಕ್ರಮ ಕೈಗೊಳ್ಳಲಾಗುತ್ತಿದೆ.<br><br>2. ಕಾವೇರಿ ಹಾಗೂ ಕನ್ನಿಕೆ ನದಿಗಳಲ್ಲಿ ಗಿಡ-ಗಂಟೆಗಳನ್ನು ತೆರವುಗೊಳಿಸಲು ದಿನಾಂಕ:10-02-2020 ರಲ್ಲಿ ರೂ.1.90 ಕೋಟಿ ಮೊತ್ತದ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾವೇರಿ ನೀರಾವರಿ ನಿಗಮ ವತಿಯಿಂದ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ.<br><br>3. ಕೊಪ್ಪ ಸೇತುವೆ ಹಾಗೂ ತಪೋವನ ಹತ್ತಿರ ಕಾವೇರಿ ಹೊಳೆಯಲ್ಲಿ ತುಂಬಿರುವ ಹೂಳನ್ನು ಮತ್ತು ಗಿಡಗಂಟಿ ತೆಗೆಯಲು 2019-20ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳು, ಕೊಡಗು ಜಿಲ್ಲೆ ರವರ ಎನ್.ಡಿ.ಆರ್.ಎಫ್ ಲೆಕ್ಕ ಶೀರ್ಷಿಕೆಯಡಿ ರೂ.88.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. |
| ಇ | ಪ್ರಸಕ್ತ ಆರ್ಥಿಕ ವರ್ಷದಲ್ಲಿ ಮಂಜೂರಾದ ಹಾಗೂ ಬಿಡುಗಡೆಯಾಗಿರುವ ಮತ್ತು ವಿನಿಯೋಗಿಸಿರುವ ಅನುದಾನ ಎಷ್ಟು; (ಸಂಪೂರ್ಣ ವಿವರಗಳನ್ನು ನೀಡುವುದು) | |
| ಈ | ಸದರಿ ಅನುದಾನದಲ್ಲಿ ಇದೂವರೆವಿಗೂ ಕೈಗೊಂಡಿರುವ ಕಾಮಗಾರಿಗಳಾವುವು? (ಪ್ರಗತಿಯ ಸಂಪೂರ್ಣ ವಿವರಗಳನ್ನು ನೀಡುವುದು) | |

***ಸಂಖ್ಯೆ:ಜಸಂಇ 160 ಎನ್‌ಎಲ್‌ಎ 2020***

(ರಮೇಶ್ ಲ. ಜಾರಕಿಹೊಳಿ)
ಜಲಸಂಪನ್ಮೂಲ ಸಚಿವರು